ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12

ಸಂಖ್ಯೆ: ಪಪೂಶಿಇ/ಶೈಶಾ/ಗಣಿ.ಆನ್.ಸ್ಪ/2020-21 ದಿನಾಂಕ: 16.12.2020

# ಸುತ್ತೋಲೆ

ವಿಷಯ: ಗಣಿತಶಾಸ್ತ್ರ ವಿಷಯಕ್ಕೆ ಸಂಬಂಧಿಸಿದಂತೆ BRICSMATH.COM - ವಾರ್ಷಿಕ ಆನ್‌ಲೈನ್ ಸ್ಪರ್ಧೆಯನ್ನು ನಡೆಸುವ ಕುರಿತು.

ಉಲ್ಲೇಖ: ಶಿಕ್ಷಣ ಸಚಿವಾಲಯ, ಶಾಲಾ ಶಿಕ್ಷಣ ಮತ್ತು ಸಾಕ್ಷರತ ಇಲಾಖೆ ಇವರ ಪತ್ರ ಸಂಖ್ಯೆ ದಿನಾಂಕ:- 26.11.2020 ಸ್ವೀಕೃತಿ ದಿನಾಂಕ: 05.12.2020

------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಶಿಕ್ಷಣ ಸಚಿವಾಲಯ, ಶಾಲಾ ಶಿಕ್ಷಣ ಮತ್ತು ಸಾಕ್ಷರತ ಇಲಾಖೆರವರು BRICSMATH.COM ಮೂಲಕ ಭಾರತವು ಸೇರಿದಂತೆ ವಿವಿಧ ದೇಶಗಳಲ್ಲಿ 1-12 ನೇ ತರಗತಿ ವಿದ್ಯಾರ್ಥಿಗಳಿಗೆ ಗಣಿತ ವಿಷಯಕ್ಕೆ ಸಂಬಂಧಿಸಿದಂತೆ ಆನ್‌ಲೈನ್ ಸ್ಪರ್ಧೆಗಳನ್ನು ನಡೆಸುತ್ತಿದೆ. ಪ್ರಸ್ತುತ 2020 ನೇ ಸಾಲಿನ ಸ್ಪರ್ಧೆಗಳನ್ನು ನವೆಂಬರ್ 16 ರಿಂದ ಡಿಸೆಂಬರ 20 ರವರೆಗೆ ನಡೆಸಲಾಗುತ್ತಿದ್ದು ಆಸಕ್ತ ಪ್ರಥಮ ಮತ್ತು ದ್ವಿತೀಯ ಪದವಿ ಪೂರ್ವ ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದೆ. ಪ್ರಾಂಶುಪಾಲರು ಮತ್ತು ಉಪನ್ಯಾಸಕರು ಈ ಸ್ಪರ್ಧೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಪಾಲ್ಗೊಳ್ಳುವಂತೆ ಹಾಗೂ ಸ್ಪರ್ಧೆಯ ಪ್ರಯೋಜನ ಪಡೆದುಕೊಳ್ಳುವಂತೆ ಪ್ರೋತ್ಸಾಹಿಸಲು ಸೂಚಿಸಿದೆ. ಈ ಸ್ಪರ್ಧೆಯು ಆನ್‌ಲೈನ್ ಮೂಲಕ ನಡೆಯುತ್ತಿದ್ದು, ಸಂಪೂರ್ಣ ಉಚಿತವಾಗಿದೆ ವಿದ್ಯಾರ್ಥಿಯು BRICSMATH.COM ವೆಬ್‌ಸೈಟ್‌ನಲ್ಲಿ ಲಾಗ್‌ಇನ್ ಆಗುವ ಮೂಲಕ ಸ್ಪರ್ಧೆಯಲ್ಲಿ ಪಾಲ್ಗೊಳ್ಳಬಹುದಾಗಿದೆ ಈ ಸುತ್ತೋಲೆ ತಲುಪಿದ ಕೂಡಲೆ ಎಲ್ಲಾ ಉಪ ನಿರ್ದೇಶಕರು ತಮ್ಮ ವ್ಯಾಪ್ತಿಯ ಪ್ರಾಂಶುಪಾಲರಿಗೆ ಅಗತ್ಯಕ್ರಮ ಕೈಗೊಳ್ಳಲು ಸೂಚಿಸಲು ಈ ಮೂಲಕ ತಿಳಿಸಿದೆ.

ಕರಡು ಮಾನ್ಯ ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ.

R. Kusum
16/12/2020

ಜಂಟಿ ನಿರ್ದೇಶಕರು(ಶೈಕ್ಷಣಿಕ)
ಪದವಿ ಪೂರ್ವ ಶಿಕ್ಷಣ ಇಲಾಖೆ

ಗೆ,

ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರ ಮೂಲಕ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಿಗೆ -ಅಗತ್ಯ ಕ್ರಮಕ್ಕಾಗಿ

ಪ್ರತಿಯನ್ನು:- 1. ಇ-ಆಡಳಿತ ಶಾಖೆಗೆ -ಅಂತರ್ ಜಾಲದಲ್ಲಿ ಅಳವಡಿಸಲು
2. ಕಛೇರಿ ಪ್ರತಿ